**ಕರ್ನಾಟಕ ವಿಧಾನ ಪರಿಷತ್ತು**

**126ನೇ ಅಧಿವೇಶನ**

**ಲಘು ಪ್ರಕಟಣೆ ಭಾಗ-2**

(ಸಾಂಸದಿಕ ಹಾಗೂ ಇತರೆ ವಿಷಯಗಳಿಗೆ ಸಂಬಂಧಿಸಿದ ಸಾಮಾನ್ಯ ಮಾಹಿತಿ)

**ಸೋಮವಾರ, ದಿನಾಂಕ: 01ನೇ ಡಿಸೆಂಬರ್, 2014**

*****

**ಸಂಖ್ಯೆ: 36**

ವಿಧಾನ ಪರಿಷತ್ತಿನ 126ನೇ ಅಧಿವೇಶನವು ದಿನಾಂಕ:09.12.2014 ರಿಂದ ಬೆಳಗಾವಿಯ ಸುವರ್ಣ ವಿಧಾನ ಸೌಧದಲ್ಲಿ ನಡೆಯಲಿದ್ದು, ಮಾನ್ಯ ವಿಧಾನ ಪರಿಷತ್ತಿನ ಸದಸ್ಯರುಗಳ ವಾಸ್ತವ್ಯಕ್ಕಾಗಿ ಬೆಳಗಾವಿ, ಹುಬ್ಬಳ್ಳಿ ಹಾಗೂ ಧಾರವಾಡ ನಗರಗಳಲ್ಲಿ ವಸತಿ ಸೌಕರ್ಯಗಳನ್ನು ಏರ್ಪಡಿಸಲಾಗುವುದು ಹಾಗೂ ಆ ಸ್ಥಳಗಳಿಂದ ಬೆಳಗಾವಿ ಅಧಿವೇಶನಕ್ಕೆ ಆಗಮಿಸುವ ಮಾನ್ಯ ಸದಸ್ಯರುಗಳಿಗೆ ಸಾರಿಗೆ ವ್ಯವಸ್ಥೆ ಬದಲಾಗಿ ಪ್ರತಿ ದಿನ ರೂ.2,500/- (ಎರಡು ಸಾವಿರದ ಐದು ನೂರು ರೂಪಾಯಿಗಳು) ಗಳ ಭತ್ಯೆಯನ್ನು ನೀಡಲಾಗುವುದೆಂದು ಹಾಗೂ ಸಾರಿಗೆ ವ್ಯವಸ್ಥೆಯನ್ನು ಮಾನ್ಯ ಸದಸ್ಯರುಗಳೇ ಮಾಡಿಕೊಳ್ಳಬೇಕೆಂದು ಮತ್ತು ಮಾನ್ಯ ಸದಸ್ಯರುಗಳಿಗೆ ಬೆಳಗಿನ ಉಪಹಾರವನ್ನು ವಾಸ್ತವ್ಯ ಹೂಡಿರುವ ಆಯಾ ಹೋಟೆಲ್‌ಗಳಲ್ಲಿಯೇ ವ್ಯವಸ್ಥೆ ಮಾಡಲಾಗಿದ್ದು, ಮಧ್ಯಾಹ್ನದ ಊಟದ ವ್ಯವಸ್ಥೆಯನ್ನು ಸುವರ್ಣ ವಿಧಾನ ಸೌಧದಲ್ಲಿ ಏರ್ಪಡಿಸಲಾಗಿರುತ್ತದೆ. ರಾತ್ರಿ ಊಟದ ವ್ಯವಸ್ಥೆಯನ್ನು ಮಾನ್ಯ ಸದಸ್ಯರುಗಳೇ ಮಾಡಿಕೊಳ್ಳಬೇಕಾಗಿ ಈ ಮೂಲಕ ಎಲ್ಲಾ ಮಾನ್ಯ ಸದಸ್ಯರುಗಳಿಗೆ ತಿಳಿಸಲಾಗಿದೆ.

**ವಿ. ಶ್ರೀಶ್**
**ಕಾರ್ಯದರ್ಶಿ**

**ವಿಧಾನ ಪರಿಷತ್ತಿನ ಮಾನ್ಯ ಸದಸ್ಯರುಗಳಿಗೆ,**